ಆ) ಈ ಯೋಜನೆಗಾಗಿ ಮಂಜೂರಾಗಿರುವ ಮೊತ್ತವೆಷ್ಟು? ಹಾಗೂ ಬಾಕಿ ಇರುವ ಕಾಮಗಾರಿಯನ್ನು ಯಾವಾಗ ಮುಕ್ತಾಯಗೊಳಿಸಲಾಗುವುದು?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು) :

ಅ) ಬೆಳ್ತಂಗಡಿ ತಾಲ್ಲೂಕು ಕ್ರೀಡಾಂಗಣದ ಆವರಣವನ್ನು ಸಮತಟ್ಟು ಮಾಡುವ ಕಾಮಗಾರಿ ಪ್ರಗತಿಯಲ್ಲಿದೆ.

ಆ) ರೂ. 22.37 ಲಕ್ಷಗಳು ಸದರಿ ಕ್ರೀಡಾಂಗಣದ ನಿರ್ಮಾಣ ಅಂದಾಜು ವೆಚ್ಚ ರೂ. 54.00 ಲಕ್ಷಗಳಾಗಿದ್ದು ಬಾಕಿ ಹಣ ಮಂಜೂರಾದ ಮೇಲೆ ಇನ್ನು 2 ವರ್ಷಗಳಲ್ಲಿ ಪೂರ್ಣಗೊಳಿಸ ಬಹುದಾಗಿದೆ.

ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಮಾಲಾಡಿ ಕೈಗಾರಿಕಾ ತರಬೇತಿ ಕೇಂದ್ರದ ಕಟ್ಟಡ

3156 - ಶ್ರೀ ಪ್ರಭಾಕರ ಕೆ. ಬಂಗೇರ (ಬೆಳ್ತಂಗಡಿ) : ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನ ಮಾಲಾಡಿ ಕೈಗಾರಿಕಾ ತರಬೇತಿ ಕೇಂದ್ರಕ್ಕೆ (ಐಟಿಐ) ಸ್ವಂತ ಕಟ್ಟಡವಿಲ್ಲದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಎ.ಎಂ. ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು) :

ಅ) ಬಂದಿದೆ.

ಆ) ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರದ ಜಮೀನು ಸ್ವಾಧೀನ ಕೆಲಸ ನಡೆಸಲಾಗುತ್ತಿದೆ. ಸ್ವಾಧೀನವಾದ ನಂತರ ಕಟ್ಟಡ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲು ಕ್ರಮ ತೆಗೆದು ಕೊಳ್ಳಲಾಗುವುದು.

ಭಾಲ್ಕಿ ವಿಧಾನ ಸಭಾ ಕ್ಷೇತ್ರದಲ್ಲಿ ರಸ್ತೆಗಳ ನಿರ್ವಹಣೆ

3157 - ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾಲ್ಕಿ ವಿಧಾನಸಭಾ ಕ್ಷೇತ್ರವಲ್ಲಿ ಎಷ್ಟು ಕಿ.ಮೀ. ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಯು ನಿರ್ವಹಿಸುತ್ತದೆ. ಕಳೆದ 3 ವರ್ಷಗಳಲ್ಲಿ ಈ ರಸ್ತೆಗಳಲ್ಲಿ ಈ ರಸ್ತೆಗಳ ನಿರ್ವಹಣೆಗಾಗಿ ಪ್ರತಿ ವರ್ಷ ಖರ್ಚು ಮಾಡಲಾದ ಹಣವೆಷ್ಟು?